1342 (2045) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್) :– ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ವಿವಿಧ ದರ್ಜೆಯ ಒಟ್ಟು ಎಷ್ಟು ಉದ್ಯೋಗಗಳನ್ನು ನೀಡಲಾಗಿದೆ;

ಆ) ಸರೋಜಿನಿ ಮಹಿಷಿ ವರದಿಯ ಪ್ರಕಾರ ಅದರಲ್ಲಿ ಕನ್ನಡಿಗರ ಪ್ರಮಾಣ ಎಷ್ಟು;

ಇ) ಕೈಗಾರಿಕಾ ಸಂಸ್ಥೆಗಳು ಉದ್ಯೋಗಗಳನ್ನು ನೀಡುವಾಗ ಅನುಸರಿಸಬೇಕಾದ ನೀತಿ – ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲು ಸರ್ಕಾರ ಸ್ಪಷ್ಟ ನಿರ್ದೇಶನವನ್ನು ನೀಡಿಲ್ಲವೆ;

ಈ) ಉದ್ಯೋಗ ನೀಡಕೆಯಲ್ಲಿ ಕನ್ನಡಿಗರಿಗೆ ಅನ್ಯಾಯ ಉಂಟು ಮಾಡಿದ ಕೈಗಾರಿಕೆಗಳ ಮಾಲೀಕರ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ;

ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಘಟಕಗಳಲ್ಲಿ ಕನ್ನಡಿಗ ನೌಕರರ ಸಂಖ್ಯೆ ಎಷ್ಟು;

ಊ) ಕನ್ನಡಿಗರಿಗೆ ಸಿಗಬೇಕಾದ ಉದ್ಯೋಗ ಅವಕಾಶಗಳನ್ನು ನ್ಯಾಯಸಮ್ಮತವಾಗಿ ದೊರಕಿಸಿಕೊಡುವಲ್ಲಿ ಸರ್ಕಾರದ ಪರಿಣಾಮಕಾರಿ ಕ್ರಮಗಳೇನು?

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಡಾ॥ ಸರೋಜಿನಿ ಮಹಿಷಿ ವರದಿಯನ್ವಯ 50 ಕ್ಕಿಂತ ಹೆಚ್ಚು ಕಾರ್ಮಿಕರುಳ್ಳ ಕಾರ್ಯನಿರತ ಬೃಹತ್, ಮಧ್ಯಮ ಮತ್ತು ಸಣ್ಣ ಕೈಗಾರಿಕಾ ಘಟಕಗಳ ಸಂಖ್ಯೆ:892 ಆಗಿದ್ದು, ಅವುಗಳಲ್ಲಿ ಎ,ಬಿ,ಸಿ,ಡಿ ದರ್ಜೆಯ ಒಟ್ಟು ಕಾರ್ಮಿಕರ ಸಂಖ್ಯೆ 2,60,682 ಇರುತ್ತದೆ.

ಆ) ಡಾ॥ ಸರೋಜಿನಿ ಮಹಿಷಿ ವರದಿ ಪ್ರಕಾರ ಕನ್ನಡಿಗರ ಸಂಖ್ಯೆ 2,51,445 ಇದ್ದು ಶೇಕಡ 96 ರ ಪ್ರಮಾಣದಲ್ಲಿರುತ್ತಾರೆ.

ಇ) ಸ್ಪಷ್ಟ ನಿರ್ದೇಶನ ನೀಡಿದೆ.

ಈ) ಡಾ॥ ಸರೋಜಿನಿ ಮಹಿಷಿ ವರದಿಯನ್ವಯ ನಿಗದಿತ ಪ್ರಮಾಣದಲ್ಲಿ ಕನ್ನಡಿಗರಿಗೆ/ ಸ್ಥಳೀಯರಿಗೆ ಉದ್ಯೋಗ ನೀಡದ ಒಟ್ಟು 127 ಮಧ್ಯಮ ಬೃಹತ್ ಘಟಕಗಳಿಗೆ ಮೇ, ಜೂನ್ 2005 ರಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರಗಳ ಮೂಲಕ ನೋಟೀಸ್‌ನ್ನು ಜಾರಿಗೊಳಿಸಲಾಗಿದೆ. ಅವುಗಳ ಪೈಕಿ 64 ಘಟಕಗಳು ಕನ್ನಡಿಗರಿಗೆ / ಸ್ಥಳೀಯರಿಗೆ ನಿಗದಿತ ಪ್ರಮಾಣದ ಉದ್ಯೋಗ ನೀಡುವುದರ ಮೂಲಕ ನ್ಯೂನತೆಯನ್ನು ಸರಿಪಡಿಸಿಕೊಂಡಿರುತ್ತಾರೆ. ಮುಂದಿನ ನೇಮಕಾತಿಯಲ್ಲಿ ನ್ಯೂನತೆಯನ್ನು ಸರಿಪಡಿಸಿಕೊಂಡು ನಿಗದಿತ ಪ್ರಮಾಣದಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗ ನೀಡುವುದಾಗಿ 53 ಘಟಕಗಳು ಉತ್ತರವನ್ನು ನೀಡಿವೆ. 6 ಕೈಗಾರಿಕಾ ಘಟಕಗಳು ಮುಚ್ಚಲ್ಪಟ್ಟಿದ್ದು ಉಳಿದ 4 ಘಟಕಗಳಿಂದ ಪ್ರತಿಕ್ರಿಯೆಯನ್ನು ನಿರೀಕ್ಷಿಸಲಾಗಿದೆ.

ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡಾ॥ ಸರೋಜಿನಿ ಮಹಿಷಿ ವರದಿಯಂತೆ 29 ಘಟಕಗಳಲ್ಲಿರುವ ಒಟ್ಟು ಕಾರ್ಮಿಕರ ಸಂಖ್ಯೆ 7255 ಆಗಿದ್ದು ಕನ್ನಡಿಗರ ಸಂಖ್ಯೆ 6803 ಆಗಿರುತ್ತದೆ.

ಊ) ಹೊಸದಾಗಿ ಪ್ರಾರಂಭವಾಗುವ ಮತ್ತು ಹಾಲಿ ಇರುವ ಕೈಗಾರಿಕಾ ಘಟಕಗಳು ಕೈಗೊಳ್ಳುವ ವಿಸ್ತರಣೆ ಯೋಜನೆ ಸಮಯದಲ್ಲಿ ಇಲಾಖೆಯಿಂದ ನೀಡುವ ಪರವಾನಿಗಿ ಪ್ರೋತ್ಸಾಹ, ರಿಯಾಯಿತಿ ಹಾಗೂ ಮೂಲಭೂತ ಸೌಕರ್ಯಗಳ ಮಂಜೂರಾತಿ ಆದೇಶದಲ್ಲಿ ಡಾ॥ ಸರೋಜಿನಿ ಮಹಿಷಿ ವರದಿಯನ್ವಯ ಸ್ಥಳೀಯರಿಗೆ/ ಕನ್ನಡಿಗರಿಗೆ ಉದ್ಯೋಗ ನೀಡುವ ಷರತ್ತನ್ನು ವಿಧಿಸಲಾಗುತ್ತಿದೆ. ಈ ರೀತಿ ವಿಧಿಸಿರುವ ಷರತ್ತಿನನ್ವಯ ಅನುಷ್ಠಾನವಾಗುತ್ತಿರುವ ಬಗ್ಗೆ ಪರಿಶೀಲನೆಯನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಏಕಗವಾಕ್ಷಿ ಸಭೆಯಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ. ಜಿಲ್ಲಾ ಮಟ್ಟದ ವರದಿಯ ಮೇಲೆ ರಾಜ್ಯ ಮಟ್ಟದಲ್ಲಿ ಪರಾಮರ್ಶೆ ನಡೆಸಿ, ನಿಗದಿತ ಪ್ರಮಾಣದಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡದ ಕೈಗಾರಿಕಾ ಘಟಕಗಳಿಗೆ ನೋಟೀಸ್ ನೀಡುವ ಮತ್ತು ಕ್ರಮ ಜರುಗಿಸುವ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ, ಸೂಚನೆಗಳನ್ನು ನೀಡಲಾಗುತ್ತಿದೆ.